**All India Radio: Bangalore**
**Regional Bulletin In Kannada**
**21.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಇಂದು ರಾಜ್ಯದೆಲ್ಲೆಡೆ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ; ವಿಧಾನಸೌಧದ ಮುಂಭಾಗದಲ್ಲಿ ಮುಖ್ಯಮಂತ್ರಿ, ರಾಜ್ಯಪಾಲರು ಭಾಗಿ
2. ಪಟ್ಟದಕಲ್ಲಿನಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಹಳೇಬೀಡಿನಲ್ಲಿ ಸೋಮಣ್ಣ ಯೋಗ - ಮಂಗಳೂರಿನಲ್ಲಿ ಗಮನ ಸೆಳೆದ ವಿಶಿಷ್ಟ ಜಲಯೋಗ
3. ಅಕ್ರಮ ಗಣಿಗಾರಿಕೆ ಕುರಿತು ಮುಖ್ಯಮಂತ್ರಿಗೆ ಪತ್ರ ಬರೆದ ಸಚಿವ ಎಚ್.ಕೆ. ಪಾಟೀಲ್ ; ಸೂಕ್ತ ಕ್ರಮ ಕೈಗೊಳ್ಳುವಂತೆ ಆಗ್ರಹ
4. ಕೋಲಾರ ಭಾಗಕ್ಕೆ ೨೦೨೭ರೊಳಗೆ ಎತ್ತಿನಹೊಳೆ ನೀರು ; ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭರವಸೆ
5. ಸಚಿವ ಪ್ರಿಯಾಂಕ್ ಖರ್ಗೆ ಅಮೆರಿಕ ಪ್ರವಾಸಕ್ಕೆ ಅನುಮತಿ ನೀಡಿದ ಕೇಂದ್ರ ಸರ್ಕಾರ

<><><><>

ದೇಶಾದ್ಯಂತ ಇಂದು ೧೧ನೇ ಅಂತಾರಾಷ್ಟ್ರೀಯ ಯೋಗ ದಿನ ಆಚರಿಸಲಾಯಿತು. ಪ್ರಧಾನಿ ನರೇಂದ್ರ ಮೋದಿ ಆಂಧ್ರಪ್ರದೇಶದ ವಿಶಾಖಪಟ್ಟಣಂನಲ್ಲಿ ನಡೆದ ಯೋಗ ದಿನಾಚರಣೆಯ ನೇತೃತ್ವ ವಹಿಸಿದ್ದರು. ಆಂಧ್ರಪ್ರದೇಶ ವಿಶಾಖಪಟ್ಟಣಂನಲ್ಲಿ ನಡೆದ ಯೋಗ ಕಾರ್ಯಕ್ರಮ ಹೊಸ ಗಿನ್ನಿಸ್ ವಿಶ್ವ ದಾಖಲೆ ಸೃಷ್ಟಿಸಿದೆ. ಒಂದೇ ಸ್ಥಳದಲ್ಲಿ ಮೂರು ಲಕ್ಷಕ್ಕೂ ಹೆಚ್ಚು ಮಂದಿ ಭಾಗವಹಿಸುವುದರೊಂದಿಗೆ ವಿಶ್ವ ದಾಖಲೆ ಸೃಷ್ಟಿಸಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ವಿಶ್ವ ಪರಂಪರೆಯ ತಾಣವಾದ ವಿರೂಪಾಕ್ಷ ದೇವಸ್ಥಾನದ ಆವರಣ ಪಟ್ಟದಕಲ್ಲಿನಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗದಿನದಲ್ಲಿ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಮನುಷ್ಯ ಮನಸ್ಸನ್ನು ಶಾಂತವಾಗಿ ಇಟ್ಟುಕೊಂಡು ಮಾನವತ್ವದಿಂದ ದೈವಿತ್ವದೆಡೆಗೆ ಹೋಗುವುದೇ ಯೋಗಾಸನ ಎಂದು ತಿಳಿಸಿದರು

**ಧ್ವನಿ : ಪ್ರಲ್ಹಾದ್ ಜೋಶಿ**

ಸಚಿವ ಕುಮಾರಸ್ವಾಮಿ, ತಮಿಳುನಾಡಿನ ಸೇಲಂ ಉಕ್ಕು ಸ್ಥಾವರದ ಆವರಣದಲ್ಲಿ ಆಯೋಜಿಸಿದ್ದ ಯೋಗದಿನದಲ್ಲಿ ಭಾಗವಹಿಸಿದ್ದರು. ಇನ್ನೊಂದೆಡೆ ಕೇಂದ್ರ ಸಚಿವ ಸೋಮಣ್ಣ ಹಳೆಬೀಡಿನಲ್ಲಿ ನಡೆದ ಯೋಗಾದಿನಾಚರಣೆಯಲ್ಲಿ ಪಾಲ್ಗೊಂಡು ಮಾತನಾಡಿ, ಮಾನವ ಮತ್ತು ಪ್ರಕೃತಿಯ ನಡುವಿನ ಆರೋಗ್ಯ ಮತ್ತು ಸಾಮರಸ್ಯಕ್ಕೆ ಯೋಗ ಸಮಗ್ರ ಸಾಧನವಾಗಿದೆ ಎಂದು ತಿಳಿಸಿದರು.

**ಧ್ವನಿ : ಸಚಿವ ವಿ. ಸೋಮಣ್ಣ**

ವಿಧಾನಸೌಧ ಮುಂಭಾಗದಲ್ಲಿ ಆಯೋಜಿಸಲಾಗಿದ್ದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಭಾಗವಹಿಸಿದ್ದರು. ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ' ಎಂಬ ಘೋಷವಾಕ್ಯದಡಿ ಈ ವರ್ಷ ರಾಜ್ಯದೆಲ್ಲೆಡೆ ಇಂದು ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಗುತ್ತಿದೆ. ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ರಾಜ್ಯ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ, ಸೇರಿದಂತೆ ಹಲವರು ಭಾಗವಹಿಸಿದ್ದರು. ೧೧ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎಂಬ ಘೋಷವಾಕ್ಯದೊಂದಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ನೆಲಮಂಗಲ ಹಾಗೂ ಹೊಸಕೋಟೆ ತಾಲ್ಲೂಕುಗಳಲ್ಲಿ ಸ್ಥಳೀಯ ಆಡಳಿತ ಹಾಗೂ ವಿವಿಧ ಯೋಗ ಸಂಸ್ಥೆಗಳ ನೇತೃತ್ವದಲ್ಲಿ ಆಚರಿಸಲಾಯಿತು. ಮನುಷ್ಯನಿಗೆ ಉತ್ತಮ ಆರೋಗ್ಯ ಮತ್ತು ಮಾನಸಿಕವಾಗಿ ಶಾಂತಿ ಪಡೆದುಕೊಳ್ಳಲು ಯೋಗ ಮತ್ತು ಧ್ಯಾನ ಸಹಕಾರಿಯಾಗಿದೆ ಎಂದು ರಾಮನಗರ ಶಾಸಕ ಇಕ್ಬಾಲ್ ಹುಸೇನ್ ತಿಳಿಸಿದ್ದಾರೆ. ಕೊಡಗು ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಮಡಿಕೇರಿಯಲ್ಲಿ ೧೧ನೇ ಅಂತಾರಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಬಳ್ಳಾರಿ ನಗರದ ಎಸ್ ಜಿ ಕಾಲೇಜು ಮೈದಾನದಲ್ಲಿ ನಡೆದ ಕಾರ್ಯಕ್ರಮಕ್ಕೆ ಮೇಯರ್ ಮುಲ್ಲಂಗಿ ನಂದೀಶ್ ಚಾಲನೆ ನೀಡಿದರು. ಗದಗ ಜಿಲ್ಲಾ ಆಯುಷ್ ಇಲಾಖೆ ಸೇರಿದಂತೆ ಹಲವಾರು ಸಂಘ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ಕೆ.ಎಚ್. ಪಾಟೀಲ್ ಕ್ರೀಡಾಂಗಣದಲ್ಲಿ ೧೧ ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಜರುಗಿತು. ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಸಂಸದ ಜಗದೀಶ್ ಶೆಟ್ಟರ್ ಸಸಿಗೆ ನೀರು ಎರೆಯುವುದರ ಮೂಲಕ ಯೋಗ ದಿನಾಚರಣೆಗೆ ಚಾಲನೆ ನೀಡಿದರು. ಮಂಗಳೂರಿನಲ್ಲಿ ವಿಶಿಷ್ಟ ಜಲಯೋಗ ಕಾರ್ಯಕ್ರಮ ಎಲ್ಲರ ಗಮನ ಸೆಳೆಯಿತು. ಮಂಗಳೂರು ಮಹಾನಗರ ಪಾಲಿಕೆಯ

ಈಜುಕೊಳದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸುಮಾರು ೪೦ ಮಂದಿ ಹವ್ಯಾಸಿ ಈಜುಗಾರರ ಬಳಗದ ಸದಸ್ಯರು ಭಾಗವಹಿಸಿ, ನೀರಿನಲ್ಲಿ ಯೋಗಾಸನ ಪ್ರದರ್ಶಿಸಿದರು.ಮಂಗಳೂರು ಮೀನುಗಾರಿಕಾ ವಿಶ್ವವಿದ್ಯಾಲಯದ ನಿವೃತ್ತ ಡೀನ್ ಎಸ್.ಎಂ. ಶಿವಪ್ರಕಾಶ್ ಅವರು ಈಜುತ್ತಲೇ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಪೋಸ್ಟ್ ಕಾರ್ಡ್ ಮೂಲಕ ಪತ್ರ ಬರೆದು ಎಲ್ಲರ ಗಮನ ಸೆಳೆದರು.

**ಧ್ವನಿ : ಜಿಂಗಲ್ (ಯೋಗ)**

<><><><>

ಅಕ್ರಮ ಗಣಿಗಾರಿಕೆ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕಾನೂನು ಸಚಿವ ಎಚ್.ಕೆ. ಪಾಟೀಲ್ ಸುಮಾರು ಏಳು ಪುಟಗಳ ಪತ್ರ ಬರೆದಿದ್ದಾರೆ. ಈ ಮೂಲಕ ಅಕ್ರಮ ಗಣಿಗಾರಿಕೆ ಸಂಬಂಧ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಯವರನ್ನು ಒತ್ತಾಯಿಸಿದ್ದಾರೆ. ಅಕ್ರಮ ಗಣಿಗಾರಿಕೆಯಿಂದಾಗಿ ರಾಜ್ಯಕ್ಕೆ ೧.೫ ಲಕ್ಷ ಕೋಟಿ ನಷ್ಟವಾದ ಬಗ್ಗೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಅಕ್ರಮ ಗಣಿಗಾರಿಕೆ ವಿರುದ್ಧ ೩೨೦ ಕಿಲೋಮೀಟರ್ ಪಾದಯಾತ್ರೆ ಮಾಡಲಾಗಿತ್ತು. ನಂತರ ಕೆಲ ಪ್ರಕರಣಗಳನ್ನು ತನಿಖಾ ಸಂಸ್ಥೆಗೆ ವಹಿಸಲಾಗಿತ್ತು. ಒಂದೆರಡು ಪ್ರಕರಣಗಳಲ್ಲಿ ಪ್ರಮುಖ ಅಪರಾಧಿಗಳಿಗೆ ಶಿಕ್ಷೆಯಾಗಿದ್ದರೆ ಅನೇಕ ಪ್ರಕರಣಗಳು ಇನ್ನು ಎಸ್ಐಟಿ ವಿಚಾರಣೆ ಹಂತದಲ್ಲೇ ಇವೆ ಎಂದು ತಿಳಿಸಿದ್ದಾರೆ. ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ ವಸೂಲಿ ಆಯುಕ್ತರನ್ನು ನೇಮಿಸಬೇಕು. ಪೊಲೀಸ್ ಇಲಾಖೆಯಡಿ ವಿಶೇಷ ತನಿಖಾ ತಂಡ ರಚನೆ ಮಾಡಬೇಕು. ವಿಶೇಷ ನ್ಯಾಯಾಲಯ ಸ್ಥಾಪಿಸಿ ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು ಎಂದು ಸಚಿವ ಎಚ್.ಕೆ. ಪಾಟೀಲ್ ಪತ್ರದಲ್ಲಿ ಒತ್ತಾಯಿಸಿದ್ದಾರೆ.

<><><><>

"೨೦೨೭ರ ಒಳಗಾಗಿ ಕೋಲಾರ ಭಾಗಕ್ಕೆ ಎತ್ತಿನ ಹೊಳೆ ನೀರನ್ನು ಹರಿಸಬೇಕು ಎಂಬುದು ನಮ್ಮ ಸರ್ಕಾರದ ಸಂಕಲ್ಪ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಯೋಜನೆಗೆ ಅರಣ್ಯ ಇಲಾಖೆಗೆ ಸಂಬಂಧಿತ ಸಮಸ್ಯೆಗಳು, ಭೂ ಸ್ವಾಧೀನ ಪ್ರಕ್ರಿಯೆ, ಬೈರಗೊಂಡಲು, ಲಕ್ಕೇನಹಳ್ಳಿಯಲ್ಲಿ ಸಮತೋಲಿತ ಜಲಾಶಯ ನಿರ್ಮಾಣಕ್ಕೆ ಸಂಬಂಧಿಸಿದ ಭೂ ಸ್ವಾಧೀನ ಹಾಗೂ ಆರ್ಥಿಕ ವಿಚಾರವಾಗಿ ಚರ್ಚೆ ನಡೆಸಲಾಗಿದೆ. ಕಾಮಗಾರಿ ನಡೆಯುವ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ಶಾಸಕ ಬಿ.ಆರ್ ಪಾಟೀಲ್ ಆಡಿಯೋ ವಿಚಾರವಾಗಿ

ಮುಖ್ಯಮಂತ್ರಿ ಸಿದ್ದರಾಮಯ್ಯ ಕ್ರಮ ಕೈಗೊಳ್ಳಲಿದ್ದಾರೆ. ಪಾರದರ್ಶಕವಾಗಿ ವಸತಿ ಹಂಚಿಕೆಯಾಗುವಾಗ ಫಲಾನುಭವಿ ಹಣ ನೀಡಲು ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ.

<><><><>

ಅಮೆರಿಕಗೆ ತೆರಳಲು ರಾಜ್ಯದ ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಕೊನೆಗೂ ಅನುಮತಿ ದೊರೆತಿದೆ. ಕೇಂದ್ರ ಸರ್ಕಾರವು ಸಚಿವರಿಗೆ ಅಮೆರಿಕ ಪ್ರವಾಸಕ್ಕೆ ವಿಧಿಸಿದ್ದ ನಿರ್ಬಂಧವನ್ನು ಹಿಂಪಡೆದಿದೆ ಎಂದು ಪ್ರಿಯಾಂಕ್ ಖರ್ಗೆ ಎಕ್ಸ್‌ನಲ್ಲಿ ಖಚಿತಪಡಿಸಿದ್ದಾರೆ. ಈ ಮೊದಲು ವಿಧಿಸಿದ್ದ ನಿರ್ಬಂಧದ ಕಾರಣಗಳು ಸ್ಪಷ್ಟವಾಗಿಲ್ಲದಿದ್ದರೂ ನಿರ್ಬಂಧ ತೆರವುಗೊಂಡಿರುವುದು ಸ್ವಾಗತಾರ್ಹ ಎಂದು ಹೇಳಿದ್ದಾರೆ. ಇದೇ ವೇಳೆ ಅನುಮತಿಯನ್ನು ಏಕೆ ನಿರಾಕರಿಸಲಾಯಿತು ? ಹಾಗೂ ವಿಷಯವು ಸಾರ್ವಜನಿಕವಾದ ನಂತರ ಹೊಣೆಗಾರಿಕೆಯನ್ನು ತಪ್ಪಿಸಲು ಹಿಂದಿನ ಆದೇಶ ರದ್ದುಗೊಳಿಸಲಾಗಿದೆಯೇ ? ಎಂದು ಅವರು ಪ್ರಶ್ನಿಸಿದ್ದಾರೆ. ನಿರ್ಬಂಧ ಖಂಡಿಸಿ ಖರ್ಗೆ ವಿದೇಶಾಂಗ ಸಚಿವಾಲಯಕ್ಕೆ ಪತ್ರ ಬರೆದ ೨ ದಿನಗಳಲ್ಲಿ ನಿರ್ಬಂಧ ತೆರವುಗೊಳಿಸಿ ಕೇಂದ್ರ ಸರ್ಕಾರ ಮರು ಆದೇಶ ಹೊರಡಿಸಿದೆ.

<><><><>

ಉಡುಪಿಯಲ್ಲಿ ದೇಶದ ಮೊಟ್ಟಮೊದಲ ಅತ್ಯಾಧುನಿಕ ಬಯೋಚಾರ್ ಘಟಕ ನಿರ್ಮಾಣವಾಗಲಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಡೆನ್ಮಾರ್ಕ್‌ನ ಮಾಷ್ ಮೇಕ್ಸ್ ಕಂಪೆನಿಯು ೧೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಮಣ್ಣಿನ ಫಲವತ್ತತೆ ಸುಧಾರಿಸುವ ಗೋಡಂಬಿ ಸಂಸ್ಕರಣೆಯ ತ್ಯಾಜ್ಯ ಬಳಸಿ ಸಮೃದ್ಧ ಇಂಗಾಲ ಹೊಂದಿರುವ ಬಯೋಚಾರ್ ತಯಾರಿಸುವ ಘಟಕ ಸ್ಥಾಪಿಸಲಿದೆ. ಇಂತಹ ಪರಿಸರ ಸ್ನೇಹಿ ಪರಿಹಾರಗಳನ್ನು ಅಭಿವೃದ್ಧಿ ಪಡಿಸುತ್ತಿರುವ ಕಂಪೆನಿಯ ಪ್ರಯತ್ನಗಳು ಶ್ಲಾಘನೀಯ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>